## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹಿಂದುಳಿದ ವರ್ಗಗಳ ಪ್ರತಿಭಾವಂತ ವಿದ್ಯಾರ್ಥಿಗಳಿಗೆ "ಡಿ.ದೇವರಾಜ ಅರಸು ಪ್ರತಿಭಾ ಪುರಸ್ಕಾರ" ನೀಡುವ ಕುರಿತು.

ಓದಲಾಗಿದೆ: 1. 2015-16ನೇ ಸಾಲಿನ ಆಯವ್ಯಯ ಭಾಷಣದ ಘೋಷಣೆಯ ಕಂಡಿಕೆ ಸಂಖ್ಯೆ (220).

2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಪ್ರಸ್ತಾವನೆ ಸಂಖ್ಯೆ: ಹಿಂವಕಇ/ತರಬೇತಿ/ ಪ.ಪೂ.ತ/CR-5/2015-16, ದಿನಾಂಕ: 22.04.2015.

********

**ಪ್ರಸ್ತಾವನೆ:**

2015-16ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಗಳು ಮಂಡಿಸಿದ ಆಯವ್ಯಯ ಭಾಷಣದ ಕಂಡಿಕೆ (220) ರಲ್ಲಿ ಈ ಕೆಳಗಿನಂತೆ ಘೋಷಿಸಲಾಗಿದೆ.

"ಎಸ್.ಎಸ್.ಎಲ್.ಸಿ., ಪಿ.ಯು.ಸಿ., ಪದವಿ, ಸ್ನಾತಕೋತ್ತರ ಪದವಿಗಳಲ್ಲಿ ಶೇಕಡ 90ಕ್ಕಿಂತ ಹೆಚ್ಚು ಅಂಕ ಗಳಿಸಿದ 2500 ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ "ಡಿ.ದೇವರಾಜ ಅರಸು ಪ್ರತಿಭಾ ಪುರಸ್ಕಾರ" ನೀಡಲಾಗುವುದು. ಇದಕ್ಕಾಗಿ 4 ಕೋಟಿ ರೂ. ಒದಗಿಸಲಾಗುವುದು."

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪ್ರಸ್ತಾವನೆಯಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರು, ಆಯವ್ಯಯ ಘೋಷಣೆಯನ್ವಯ 2015-16ನೇ ಸಾಲಿನಿಂದ ಹಿಂದುಳಿದ ವರ್ಗಗಳ ಪ್ರತಿಭಾವಂತ ವಿದ್ಯಾರ್ಥಿಗಳಿಗೆ "ಡಿ.ದೇವರಾಜ ಅರಸು ಪ್ರತಿಭಾ ಪುರಸ್ಕಾರ" ಕಾರ್ಯಕ್ರಮವನ್ನು ಅನುಷ್ಠಾನ ಮಾಡಲು ಸರ್ಕಾರದ ಆದೇಶದೊಂದಿಗೆ ಮಾರ್ಗಸೂಚಿಗಳನ್ನು ಹೊರಡಿಸುವಂತೆ ಕೋರಿರುತ್ತಾರೆ.

ಈ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಹಿಂವಕ 490 ಬಿಎಂಎಸ್ 2015, ದಿನಾಂಕ: 11.06.2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2015-16ನೇ ಸಾಲಿನಿಂದ ಎಸ್.ಎಸ್.ಎಲ್.ಸಿ, ಪಿ.ಯು.ಸಿ., ಪದವಿ ಹಾಗೂ ಸ್ನಾತಕೋತ್ತರ ಪದವಿಗಳಲ್ಲಿ ಶೇ.90ಕ್ಕಿಂತ ಹೆಚ್ಚು ಅಂಕ ಗಳಿಸಿದ 2500 ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಈ ಕೆಳಕಂಡಂತೆ "ಡಿ.ದೇವರಾಜ ಅರಸು ಪ್ರತಿಭಾ ಪುರಸ್ಕಾರ"ವನ್ನು ಅನುಬಂಧದಲ್ಲಿನ ಮಾರ್ಗಸೂಚಿಗಳನ್ವಯ ನೀಡಲು ಅನುಮೋದನೆ ನೀಡಿ ಆದೇಶಿಸಿದೆ.

| ಕ್ರ.ಸಂ. | ತರಗತಿ/ಕೋರ್ಸ್ | ಪ್ರತಿಭಾ ಪುರಸ್ಕಾರ ನೀಡಬೇಕಾದ ವಿದ್ಯಾರ್ಥಿಗಳ ಸಂಖ್ಯೆ | ಮೊತ್ತ (ರೂ.ಗಳಲ್ಲಿ) |
|---|---|---|---|
| 1 | ಎಸ್.ಎಸ್.ಎಲ್.ಸಿ | 1000 | 10,000/- |
| 2 | ದ್ವಿತೀಯ ಪಿ.ಯು.ಸಿ. | 500 | 15,000/- |
| 3 | ಪದವಿ/ಸ್ನಾತಕೋತ್ತರ ಪದವಿ | 500 | 20,000/- |
| 4 | ವೃತ್ತಿಪರ ಪದವಿ/ವೃತ್ತಿಪರ ಸ್ನಾತಕೋತ್ತರ ಪದವಿ | 500 | 25,000/- |

ಈ ಕಾರ್ಯಕ್ರಮಕ್ಕೆ ತಗಲುವ ವೆಚ್ಚವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತರಬೇತಿ, ಅರಿವು ಮತ್ತು ಪ್ರೋತ್ಸಾಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಕಾರ್ಯಕ್ರಮ ರಾಜ್ಯವಲಯ ಯೋಜನೆ ಲೆಕ್ಕಶೀರ್ಷಿಕೆ 2225-03-277-2-37 ರಡಿ ಒದಗಿಸಿರುವ ಅನುದಾನದಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 456 ವೆಚ್ಚ-3/2015, ದಿನಾಂಕ:10.06.2015ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಆರ್.ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

<u>ಇವರಿಗೆ:</u>

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಆಂತರಿಕ ಆರ್ಥಿಕ ಸಲಹೆಗಾರರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಸರ್ಕಾರದ ಆದೇಶ ಸಂಖ್ಯೆ: ಹಿಂವಕ 490 ಬಿಎಂಎಸ್ 2015, ದಿನಾಂಕ: 11.06.2015ಕ್ಕೆ ಅನುಬಂಧ

## ಹಿಂದುಳಿದ ವರ್ಗಗಳ ಪ್ರತಿಭಾವಂತ ವಿದ್ಯಾರ್ಥಿಗಳಿಗೆ "ಡಿ.ದೇವರಾಜ ಅರಸು ಪ್ರತಿಭಾ ಪುರಸ್ಕಾರ" ಯೋಜನೆಯ ಮಾರ್ಗಸೂಚಿಗಳು

(ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಈ ಸೌಲಭ್ಯವನ್ನು ಪಡೆಯಲು ಅರ್ಹರಿರುವುದಿಲ್ಲ.)

I. ಯೋಜನೆಯ ಉದ್ದೇಶ:

1. ಹಿಂದುಳಿದ ವರ್ಗಗಳ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಡಿ.ದೇವರಾಜ ಅರಸುರವರ ಜನ್ಮ ಶತಮಾನೋತ್ಸವದ ಅಂಗವಾಗಿ 2015-16ನೇ ಸಾಲಿನಿಂದ "ಡಿ.ದೇವರಾಜ ಅರಸು ಪ್ರತಿಭಾ ಪುರಸ್ಕಾರ" ವನ್ನು ನೀಡಿ, ಶೈಕ್ಷಣಿಕ ಪ್ರೋತ್ಸಾಹವನ್ನು ನೀಡುವುದು.

2. ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿ.ಯು.ಸಿ. ಪರೀಕ್ಷೆಗಳಲ್ಲಿ ಶೇಕಡ 90 ಮತ್ತು ಅದಕ್ಕಿಂತ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಅನುದಾನ ಲಭ್ಯತೆ ಹಾಗೂ ಭೌತಿಕ ಗುರಿಗೆ ಅನುಗುಣವಾಗಿ "ಡಿ.ದೇವರಾಜ ಅರಸು ಪ್ರತಿಭಾ ಪುರಸ್ಕಾರ" ವನ್ನು ನೀಡುವುದು.

3. ಸಾಮಾನ್ಯ ಹಾಗೂ ವೃತ್ತಿಪರ ಪದವಿ/ಸ್ನಾತಕೋತ್ತರ ಪದವಿಗಳಲ್ಲಿ ಶೇಕಡ 90 ಮತ್ತು ಅದಕ್ಕಿಂತ ಹೆಚ್ಚು ಅಂಕ ಗಳಿಸಿದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೊದಲ ಆದ್ಯತೆಯ ಮೇಲೆ "ಡಿ.ದೇವರಾಜ ಅರಸು ಪ್ರತಿಭಾ ಪುರಸ್ಕಾರ" ವನ್ನು ನೀಡುವುದು. ಶೇಕಡ 90 ಮತ್ತು ಅದಕ್ಕಿಂತ ಹೆಚ್ಚು ಅಂಕ ಗಳಿಸಿದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ದೊರಕದೇ ಇದ್ದಲ್ಲಿ ಗರಿಷ್ಠ ಅಂಕ ಗಳಿಸಿದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಅನುದಾನ ಲಭ್ಯತೆ ಹಾಗೂ ಭೌತಿಕ ಗುರಿಗೆ ಅನುಗುಣವಾಗಿ "ಡಿ.ದೇವರಾಜ ಅರಸು ಪ್ರತಿಭಾ ಪುರಸ್ಕಾರ" ವನ್ನು ನೀಡುವುದು.

II. "ಡಿ.ದೇವರಾಜ ಅರಸು ಪ್ರತಿಭಾ ಪುರಸ್ಕಾರ" ದ ಮೊತ್ತವನ್ನು ಈ ಕೆಳಗಿನಂತೆ ನಿಗದಿಪಡಿಸಲಾಗಿದೆ.

| ಕ್ರ. ಸಂ. | ತರಗತಿ/ಕೋರ್ಸ್ | ಪ್ರತಿಭಾ ಪುರಸ್ಕಾರ ನೀಡಬೇಕಾದ ವಿದ್ಯಾರ್ಥಿಗಳ ಸಂಖ್ಯೆ | ಪ್ರತಿಭಾ ಪುರಸ್ಕಾರದ ಮೊತ್ತ (ರೂ.ಗಳಲ್ಲಿ) |
|---|---|---|---|
| 1 | ಎಸ್.ಎಸ್.ಎಲ್.ಸಿ. | 1000 | 10,000 |
| 2 | ದ್ವಿತೀಯ ಪಿ.ಯು.ಸಿ. | 500 | 15,000 |
| 3 | ಪದವಿ/ಸ್ನಾತಕೋತ್ತರ ಪದವಿ (ಸಾಮಾನ್ಯ) | 500 | 20,000 |
| 4 | ವೃತ್ತಿಪರ ಪದವಿ/ವೃತ್ತಿಪರ ಸ್ನಾತಕೋತ್ತರ ಪದವಿ (ತಾಂತ್ರಿಕ, ವೈದ್ಯಕೀಯ ಹಾಗೂ ಸಂಬಂಧಿತ ವಿಜ್ಞಾನ) | 500 | 25,000 |

III. ನಿಗದಿಪಡಿಸಿರುವ ಅರ್ಹತೆಗಳು:

1. ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿಯಾಗಿರಬೇಕು.
2. ಕರ್ನಾಟಕ ಸರ್ಕಾರ ಅಧಿಸೂಚಿಸಿರುವ ಹಿಂದುಳಿದ ವರ್ಗಗಳ ಪಟ್ಟಿಗೆ ಸೇರಿರಬೇಕು.
3. ಶಾಸನಬದ್ಧ ವಿಶ್ವವಿದ್ಯಾಲಯಗಳು/ಅಧೀನಕ್ಕೆ ಒಳಪಡುವ/ಸರ್ಕಾರಿ/ಸ್ಥಳೀಯ ಸಂಸ್ಥೆಗಳು/ ಅನುದಾನಿತ ಸಂಸ್ಥೆಗಳು/ಮಾನ್ಯತೆ ಪಡೆದ ಅನುದಾನ ರಹಿತ ಖಾಸಗಿ ಸಂಸ್ಥೆಗಳಲ್ಲಿ ಅಧ್ಯಯನ ಮಾಡಿರಬೇಕು.
4. ಸಮಾನ ಕೋರ್ಸ್‌ಗಳಿಗೆ ಸಂಬಂಧಿಸಿದಂತೆ ಒಬ್ಬ ವಿದ್ಯಾರ್ಥಿಗೆ ಒಂದು ಬಾರಿ ಮಾತ್ರ ಈ ಸೌಲಭ್ಯವನ್ನು ಒದಗಿಸುವುದು.
5. ಕುಟುಂಬದ ಒಟ್ಟು ವಾರ್ಷಿಕ ಆದಾಯಮಿತಿ:
   - ಪ್ರವರ್ಗ-1 – ರೂ.2.50 ಲಕ್ಷ.
   - ಪ್ರವರ್ಗ-2(ಎ), 3(ಎ) ಮತ್ತು 3(ಬಿ) – ರೂ.1.00 ಲಕ್ಷ.

IV. ಅನುದಾನ ಹಂಚಿಕೆ ವಿಧಾನ:

1. ವರ್ಷವಾರು ಒದಗಿಸಲಾಗುವ ಆಯವ್ಯಯದ ಲಭ್ಯತೆ, ವಿದ್ಯಾರ್ಥಿಗಳ ಅರ್ಹತೆ ಹಾಗೂ ಮೀಸಲಾತಿಯನ್ವಯ "ಡಿ.ದೇವರಾಜ ಅರಸು ಪ್ರತಿಭಾ ಪುರಸ್ಕಾರ" ಕ್ಕೆ ವಿದ್ಯಾರ್ಥಿಗಳನ್ನು ಪರಿಗಣಿಸುವುದು.

2. ಪ್ರತಿ ತರಗತಿ/ಕೋರ್ಸ್‌ನಲ್ಲಿ ಪ್ರವರ್ಗವಾರು ಹಂಚಿಕೆ ಮಾಡಬೇಕಾಗಿರುವ ಅನುದಾನದ ವಿವರ.

| ಕ್ರ. ಸಂ. | ಪ್ರವರ್ಗ | ಶೇಕಡವಾರು |
|---|---|---|
| 1 | 1 | 24% |
| 2 | 2(ಎ) | 46% |
| 3 | 3(ಎ) | 14% |
| 4 | 3(ಬಿ) | 16% |
| | ಒಟ್ಟು | 100% |

ಯಾವುದಾದರೂ ಪ್ರವರ್ಗದಲ್ಲಿ ಅರ್ಹ ವಿದ್ಯಾರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ಮೀಸಲಾತಿ ಹಾಗೂ ಬೇಡಿಕೆಯನ್ವಯ ಇತರೆ ಪ್ರವರ್ಗಗಳಿಗೆ ಅನುದಾನವನ್ನು ಮರು ಹಂಚಿಕೆ ಮಾಡುವುದು.

3. ಎಸ್.ಎಸ್.ಎಲ್.ಸಿ. ಗೆ ಸಂಬಂಧಿಸಿದಂತೆ ಅನುದಾನವನ್ನು ಈ ಕೆಳಗಿನಂತೆ ಹಂಚಿಕೆ ಮಾಡುವುದು.

| ಕ್ರ. ಸಂ. | ವಿವರ | ನಿಗದಿಪಡಿಸಿದ ಅನುದಾನ | ಷರಾ |
|---|---|---|---|
| 1 | • ಸರ್ಕಾರಿ ಶಾಲೆ<br>• ಅನುದಾನಿತ/ಅನುದಾನ ರಹಿತ ಕನ್ನಡ ಮಾಧ್ಯಮ ಶಾಲೆಗಳಲ್ಲಿ ಅಧ್ಯಯನ ಮಾಡಿರುವ ವಿದ್ಯಾರ್ಥಿಗಳು. | ಶೇ.50 | ಕ್ರಮ ಸಂಖ್ಯೆ 1 ರಲ್ಲಿ ಅರ್ಹ ವಿದ್ಯಾರ್ಥಿಗಳು ಲಭ್ಯವಾಗದೇ ಇದ್ದಲ್ಲಿ ಕ್ರಮ ಸಂಖ್ಯೆ 2 ರ ವಿದ್ಯಾರ್ಥಿಗಳಿಗೆ ಅನುದಾನವನ್ನು ಮರುಹಂಚಿಕೆ ಮಾಡುವುದು. |
| 2 | ಅನುದಾನಿತ/ಅನುದಾನ ರಹಿತ ಶಾಲೆಗಳಲ್ಲಿ ಅಧ್ಯಯನ ಮಾಡಿರುವ ವಿದ್ಯಾರ್ಥಿಗಳು. | ಶೇ.50 | |

4. ಪ್ರತಿ ತರಗತಿ/ಕೋರ್ಸ್ ಹಾಗೂ ಪ್ರವರ್ಗಗಳಲ್ಲಿ ಮಹಿಳಾ ವಿದ್ಯಾರ್ಥಿಗಳಿಗೆ ಶೇ.33 ರಂತೆ ಮತ್ತು ವಿಕಲಚೇತನ ವಿದ್ಯಾರ್ಥಿಗಳಿಗೆ ಶೇ.03 ರಂತೆ ಅನುದಾನವನ್ನು ಹಂಚಿಕೆ ಮಾಡುವುದು. ಮಹಿಳಾ ಮತ್ತು ವಿಕಲಚೇತನ ವಿದ್ಯಾರ್ಥಿಗಳು ಲಭ್ಯವಿಲ್ಲದೇ ಇದ್ದಲ್ಲಿ ಅದೇ ಪ್ರವರ್ಗದ ಇತರೆ ವಿದ್ಯಾರ್ಥಿಗಳನ್ನು "ಡಿ.ದೇವರಾಜ ಅರಸು ಪ್ರತಿಭಾ ಪುರಸ್ಕಾರ" ಕ್ಕೆ ಪರಿಗಣಿಸುವುದು.

5. ಪದವಿ/ಸ್ನಾತಕೋತ್ತರ ಪದವಿಗಳ ವಿದ್ಯಾರ್ಥಿಗಳಿಗೆ ನೀಡುವ ಪ್ರತಿಭಾ ಪುರಸ್ಕಾರದಲ್ಲಿ ಶೇ.50 ರಷ್ಟು ಪದವಿ ವಿದ್ಯಾರ್ಥಿಗಳಿಗೆ ಹಾಗೂ ಶೇ.50 ರಷ್ಟು ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳಿಗೆ ಅನುದಾನ ಹಂಚಿಕೆ ಮಾಡಬೇಕು.

6. ವೃತ್ತಿಪರ ಪದವಿ/ವೃತ್ತಿಪರ ಸ್ನಾತಕೋತ್ತರ ಪದವಿಗಳ ವಿದ್ಯಾರ್ಥಿಗಳಿಗೆ ನೀಡುವ ಪ್ರತಿಭಾ ಪುರಸ್ಕಾರದಲ್ಲಿ ಶೇ.60 ರಷ್ಟು ಪದವಿ ವಿದ್ಯಾರ್ಥಿಗಳಿಗೆ ಹಾಗೂ ಶೇ.40 ರಷ್ಟು ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳಿಗೆ ಅನುದಾನ ಹಂಚಿಕೆ ಮಾಡಬೇಕು.

7. ವಿಶ್ವವಿದ್ಯಾಲಯಗಳಿಗೆ ಸಂಬಂಧಿಸಿದ ಕೋರ್ಸ್‌ಗಳಿಗೆ ಅನುದಾನ ಹಂಚಿಕೆಯನ್ನು ಮಾಡುವಾಗ ವಿಶೇಷ ಅಭಿವೃದ್ಧಿ ಯೋಜನೆಯಡಿ ನಿಗದಿಪಡಿಸಿರುವ ಅನುದಾನ ಹಂಚಿಕೆಯ ಮಾರ್ಗಸೂಚಿಯನ್ನು ಅನುಸರಿಸುವುದು.

**V. ಅನುದಾನ ಬಿಡುಗಡೆ ವಿಧಾನ:**

1. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಆಯಾ ಕೋರ್ಸ್‌ಗೆ ಸಂಬಂಧಿಸಿದಂತೆ ಅರ್ಹ ವಿದ್ಯಾರ್ಥಿಗಳ ಮೆರಿಟ್, ಮೀಸಲಾತಿ ಮತ್ತು ಅನುದಾನ ಲಭ್ಯತೆಗನುಗುಣವಾಗಿ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಅನುದಾನವನ್ನು ಬಿಡುಗಡೆ ಮಾಡುವುದು.

2. ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ ಅನುದಾನವನ್ನು ಮರುಬಿಡುಗಡೆ ಮಾಡುವುದು.

**VI. ಮಂಜೂರಾತಿ ಪ್ರಾಧಿಕಾರ:**

ಆಯಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು "ಡಿ.ದೇವರಾಜ ಅರಸು ಪ್ರತಿಭಾ ಪುರಸ್ಕಾರ" ದ ಮಂಜೂರಾತಿ ಪ್ರಾಧಿಕಾರಿಯಾಗಿರುತ್ತಾರೆ.

**VII. ಮಂಜೂರಾತಿ ವಿಧಾನ:**

1. ಈ ಯೋಜನೆಯಡಿ ಸೌಲಭ್ಯವನ್ನು ಪಡೆಯಲು ಇಚ್ಛಿಸುವ ಅರ್ಹ ವಿದ್ಯಾರ್ಥಿಗಳು ನಿಗದಿತ ಅರ್ಜಿ ನಮೂನೆಯಲ್ಲಿ ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು. ಅರ್ಜಿಯೊಂದಿಗೆ ನಿಗದಿತ ದಾಖಲೆಗಳನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಬೇಕು.

2. ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಸಲ್ಲಿಸಿರುವ ಅರ್ಜಿಯ ಪ್ರತಿ ಹಾಗೂ ಅಪ್‌ಲೋಡ್ ಮಾಡಿರುವ ಎಲ್ಲಾ ದಾಖಲೆಗಳ ದೃಢೀಕೃತ ಪ್ರತಿಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಯಲ್ಲಿ ಸಲ್ಲಿಸಬೇಕು.

3. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ವಿದ್ಯಾರ್ಥಿಗಳು ಸಲ್ಲಿಸುವ ದಾಖಲೆಗಳನ್ನು ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡಿರುವ ದಾಖಲೆಗಳೊಂದಿಗೆ ಪರಿಶೀಲಿಸುವುದು.

4. ಆಯುಕ್ತರ ಕಛೇರಿಯಿಂದ ಮೆರಿಟ್ ಮತ್ತು ಮೀಸಲಾತಿಗನುಗುಣವಾಗಿ ನೀಡಲಾಗುವ ಅರ್ಹ ವಿದ್ಯಾರ್ಥಿಗಳ ಪಟ್ಟಿಗನುಗುಣವಾಗಿ ಆಯಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ "ಡಿ.ದೇವರಾಜ ಅರಸು ಪ್ರತಿಭಾ ಪುರಸ್ಕಾರ" ದ ಮೊತ್ತವನ್ನು ಜಮಾ ಮಾಡುವುದು.

5. ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಕೋರ್ಸ್‌ಗಳಿಗೆ ಸಂಬಂಧಿಸಿದಂತೆ ಪ್ರತಿ ವರ್ಷ ನಡೆಯುವ ಡಿ.ದೇವರಾಜ ಅರಸು ಜನ್ಮ ದಿನಾಚರಣೆಯಂದು ಅರ್ಹ ವಿದ್ಯಾರ್ಥಿಗಳಿಗೆ "ಡಿ.ದೇವರಾಜ ಅರಸು ಪ್ರತಿಭಾ ಪುರಸ್ಕಾರ" ವನ್ನು ವಿತರಿಸುವುದು.

6. ಪದವಿ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಆಯಾ ವರ್ಷದ ಅಕ್ಟೋಬರ್ ತಿಂಗಳ ಒಳಗಡೆ "ಡಿ.ದೇವರಾಜ ಅರಸು ಪ್ರತಿಭಾ ಪುರಸ್ಕಾರ" ವನ್ನು ವಿತರಿಸುವುದು.

VIII. ಇತರೆ:

1. ಪ್ರವರ್ಗವಾರು ಜಾತಿಗಳ ಪಟ್ಟಿ, ಕುಟುಂಬದ ವಾರ್ಷಿಕ ವರಮಾನ, ಅರ್ಹತೆ ಇತ್ಯಾದಿಗಳು ಸರ್ಕಾರವು ಕಾಲ-ಕಾಲಕ್ಕೆ ಹೊರಡಿಸುವ ಆದೇಶಗಳನ್ವಯ ಪರಿಷ್ಕರಣೆಗೆ ಒಳಪಟ್ಟಿರುತ್ತದೆ.
2. ಈ ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಕಾರ್ಯವಿಧಾನವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತರು ನಿರ್ಧರಿಸುವುದು.

(ಆರ್.ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಆಂತರಿಕ ಆರ್ಥಿಕ ಸಲಹೆಗಾರರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.